INDIAN RED CROSS SOCIETY KARNATAKA STATE BRANCH
2480 Date 04/01/22

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಪದವಿ ಪೂರ್ವ ಕಾಲೇಜುಗಳಲ್ಲಿ ಕಿರಿಯ ರೆಡ್ ಕ್ರಾಸ್ ಘಟಕಗಳನ್ನು ಪ್ರಾರಂಭಿಸುವ ಬಗ್ಗೆ.

ಓದಲಾಗಿದೆ:- ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆರವರ ಪತ್ರ ಸಂಖ್ಯೆ: ಪಪೂಶಿ/ಶೈಶಾ/ರೆ.ಕ್ರಾಘ/2021-22.

* * *

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆರವರು ರಾಜ್ಯದ ಎಲ್ಲಾ ಸರ್ಕಾರಿ, ಅನುದ್ಹಾನಿತ/ಅನುದ್ಹಾನರಹಿತ ಪ್ರೌಢ ಶಾಲೆಗಳಲ್ಲಿ ಕಿರಿಯ ರೆಡ್‌ಕ್ರಾಸ್ ಶಾಖೆ ಪ್ರಾರಂಭಿಸಿ, ಪ್ರತೀ ವರ್ಷವೂ ಶಾಲಾ ಸಧಸ್ಯತ್ವದ ಶುಲ್ಕವಾಗಿ ರೂ.100/-ಗಳನ್ನು ಪಾವತಿಸಿ ಹಾಗೂ ಪ್ರತಿ ವರ್ಷ ಪ್ರತಿಯೊಬ್ಬ ಪ್ರೌಢ ಶಾಲಾ ವಿಧ್ಯಾರ್ಥಿಯಿಂದ ರೂ.10/-ಅನ್ನು ಸಂಗ್ರಹಿಸಿ, ಅದರಲ್ಲಿ ರೂ.4/-ನ್ನು ಭಾರತೀಯ ರೆಡ್‌ಕ್ರಾಸ್ ಸಂಸ್ಥೆ, ಕರ್ನಾಟಕ ರಾಜ್ಯ ಶಾಖೆ, ಬೆಂಗಳೂರು ಇಲ್ಲಿಗೆ ಪಾವತಿಸಿ ನೋಂದಾಯಿಸಿಕೊಳ್ಳುವಂತೆ ಹಾಗೂ ಉಳಿದ ರೂ.6/-ಗಳನ್ನು ಶಾಲೆಯಲ್ಲಿ ರೆಡ್‌ಕ್ರಾಸ್ ಚಟುವಟಿಕೆಗಳಿಗೆ ಉಪಯೋಗಿಸಿಕೊಳ್ಳುವಂತೆ ಸರ್ಕಾರದ ಆದೇಶ ಸಂಖ್ಯೆ :ಇಡಿ 192 ಎಸ್‌ಎಲ್‌ಬಿ 2017 ದಿನಾಂಕ :03-03-2020ರಲ್ಲಿ ಆದೇಶಿಸಲಾಗಿದೆ. ಅದರಂತೆ, ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳಲ್ಲಿ ಇದುವರೆಗೂ ಯುವರೆಡ್ ಕ್ರಾಸ್ ಅಥವಾ ಕಿರಿಯ ರೆಡ್ ಕ್ರಾಸ್ ಸದಸ್ಯತ್ವ ಪಡೆದಿರುವುದಿಲ್ಲ ಮತ್ತು ರೆಡ್ ಕ್ರಾಸ್ ಚಟುವಟಿಕೆಗಳಲ್ಲಿ ಭಾಗವಹಿಸುತ್ತಿಲ್ಲ. ಆದುದ್ದರಿಂದ ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳನ್ನು ಕಿರಿಯ ರೆಡ್ ಕ್ರಾಸ್ ವಿಭಾಗಕ್ಕೆ ರೂ.100/-ನ್ನು ಸದಸ್ಯತ್ವ ಶುಲ್ಕವಾಗಿ ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಕರ್ನಾಟಕ ರಾಜ್ಯ ಶಾಖೆಗೆ ಪಾವತಿಸಿ, ಪ್ರತಿಯೊಬ್ಬ ವಿದ್ಯಾರ್ಥಿಯಿಂದ ರೂ.25/-ನ್ನು ರೆಡ್ ಕ್ರಾಸ್ ಶುಲ್ಕವಾಗಿ ಸಂಗ್ರಹಿಸಿ, ಸದರಿ ರೂ.25/-ರಲ್ಲಿ ರೂ.10/-ನ್ನು ಬಾರತೀಯ ರೆಡ್ ಕ್ರಾಸ್ ಸಂಸ್ಥೆ, ಕರ್ನಾಟಕ ರಾಜ್ಯ ಶಾಖೆ, ಬೆಂಗಳೂರು-560 001 ಇಲ್ಲಿಗೆ ಕಳುಹಿಸಿಕೊಡುವಂತೆ ಹಾಗೂ ಉಳಿದ ರೂ.15/-ನ್ನು ಪದವಿ ಪೂರ್ವ ಕಾಲೇಜುಗಳಲ್ಲಿಯೇ ಉಳಿಸಿಕೊಳ್ಳುವಂತೆ ಪದವಿ ಪೂರ್ವ ಇಲಾಖೆಯಿಂದ ಆದೇಶ ಹೊರಡಿಸಬೇಕೆಂದು ಶ್ರೀ ಎಸ್.ನಾಗಣ್ಣ, ಸಭಾಪತಿ, ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಕರ್ನಾಟಕ ರಾಜ್ಯ ಶಾಖೆ, ಬೆಂಗಳೂರು ಇವರು ಕೋರಿರುತ್ತಾರೆ. ಈ ಕುರಿತಂತೆ ಸರ್ಕಾರದ ಹಂತದಲ್ಲಿ ನಿರ್ಣಯಿಸಿ, ಆದೇಶ ಹೊರಡಿಸುವಂತೆ ನಿರ್ದೇಶಕರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆರವರ ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಇಪಿ 218 ಎಸ್‌ಹೆಚ್‌ಹೆಚ್ 2021**
**ಬೆಂಗಳೂರು, ದಿನಾಂಕ:04-01-2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನರಹಿತ ಪದವಿ ಪೂರ್ವ ಕಾಲೇಜುಗಳಲ್ಲಿ ಕಿರಿಯ ರೆಡ್ ಕ್ರಾಸ್ ಘಟಕಗಳನ್ನು ಪ್ರಾರಂಭಿಸಲು ಕಿರಿಯ ರೆಡ್ ಕ್ರಾಸ್ ವಿಭಾಗಕ್ಕೆ ವಾರ್ಷಿಕವಾಗಿ ರೂ.100/-ಗಳನ್ನು(ನೂರು ರೂಪಾಯಿಗಳು ಮಾತ್ರ) ಸದಸ್ಯತ್ವ ಶುಲ್ಕವಾಗಿ ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಕರ್ನಾಟಕ ರಾಜ್ಯ ಶಾಖೆ, ಬೆಂಗಳೂರು ಇಲ್ಲಿ ಪಾವತಿಸಿ ನೋಂದಾಯಿಸಿಕೊಳ್ಳುವುದು, ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರತಿಯೊಬ್ಬ ವಿದ್ಯಾರ್ಥಿಯಿಂದ ರೂ.25/-ಗಳನ್ನು(ಇಪ್ಪತ್ತೈದು ರೂಪಾಯಿಗಳು ಮಾತ್ರ) ರೆಡ್ ಕ್ರಾಸ್ ಶುಲ್ಕವಾಗಿ ಸಂಗ್ರಹಿಸಿ, ಅದರಲ್ಲಿ ರೂ.10/-ಗಳನ್ನು(ಹತ್ತು ರೂಪಾಯಿಗಳು ಮಾತ್ರ) ಭಾರತೀಯ

ರೆಡ್ ಕ್ರಾಸ್ ಸಂಸ್ಥೆ, ಕರ್ನಾಟಕ ರಾಜ್ಯ ಶಾಖೆ, ಬೆಂಗಳೂರು-560 001 ಇಲ್ಲಿಗೆ ಕಳುಹಿಸಿಕೊಡುವಂತೆ ಹಾಗೂ ರೂ.15/-ಗಳನ್ನು(ಹದಿನೈದು ರೂಪಾಯಿಗಳು ಮಾತ್ರ) ಕಿರಿಯ ರೆಡ್ ಕ್ರಾಸ್ ಚಟುವಟಿಕೆಗಳಿಗಾಗಿ ಪದವಿ ಪೂರ್ವ ಕಾಲೇಜುಗಳಲ್ಲಿಯೇ ಉಳಿಸಿಕೊಳ್ಳಲು ಸರ್ಕಾರದ ಮಂಜೂರಾತಿಯನ್ನು ನೀಡಿ ಆದೇಶಿಸಿದೆ.

ಈ ಬಗ್ಗೆ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಇವರು ಸೂಕ್ತ ಸುತ್ತೋಲೆಯನ್ನು ಹೊರಡಿಸಲು ಸೂಕ್ತ ಕ್ರಮಕೈಗೊಳ್ಳುವಂತೆ ತಿಳಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

Padmini S.N 11/1/22
(ಪದ್ಮಿನಿ ಎಸ್.ಎನ್.)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ(ಪದವಿ ಪೂರ್ವ ಶಿಕ್ಷಣ)

ಇವರಿಗೆ:-

1. ಮಹಾಲೇಖಪಾಲರು, ಕರ್ನಾಟಕ(ಎ & ಇ), ಬೆಂಗಳೂರು.
2. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು.
3. ಸಂಬಂಧಿಸಿದ ಜಿಲ್ಲಾ ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ(ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆರವರ ಮೂಲಕ).
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.